## 2004 ರ ಕರ್ನಾಟಕ ಅಧಿನಿಯಮ ಸಂಖ್ಯೆ 11

## ಕರ್ನಾಟಕ ಧನ ವಿನಿಯೋಗ ಅಧಿನಿಯಮ, 2004

## ಪ್ರಕರಣಗಳ ಪಟ್ಟಿ

**ಪ್ರಕರಣಗಳು**

1. ಸಂಕ್ಷಿಪ್ತ ಹೆಸರು
2. ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ 2003-2004ನೇ ಹಣಕಾಸು ವರ್ಷಕ್ಕಾಗಿ 719712.03 ರೂಪಾಯಿಗಳ ನೀಡಿಕೆ
3. ಧನವಿನಿಯೋಗ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

2003-2004 ನೇ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ರಾಜ್ಯದ ಸಂಚಿತ ನಿಧಿಯೊಳಗಿನಿಂದ ವಿನಿಯೋಗಿಸಲು ಭಾರತ ಸಂವಿಧಾನದ 205 ನೇ (1)(ಎ) ಅನುಚ್ಛೇದದ ಉಪಬಂಧಗಳಿಗನುಸಾರವಾಗಿ ಈ ವಿಧೇಯಕವನ್ನು ಮಂಡಿಸಲಾಗಿದೆ.

[2004ರ ವಿಧಾನ ಸಭೆಯ ವಿಧೇಯಕ ಸಂಖ್ಯೆ 10]

## 2004 ರ ಕರ್ನಾಟಕ ಅಧಿನಿಯಮ ಸಂಖ್ಯೆ 11

(2004 ರ ಮಾರ್ಚ್ ಐದನೇ ದಿನಾಂಕದಂದು ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ಧನ ವಿನಿಯೋಗ ಅಧಿನಿಯಮ, 2004

(2004 ರ ಮಾರ್ಚ್ ನಾಲ್ಕನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

2003-2004 ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಕೆಲವು ಅಧಿಕ ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡಲು ಒಂದು ಅಧಿನಿಯಮ.

2003-2004 ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಆ ಪೈಕಿಯಿಂದ ಕೆಲವು ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೈದನೆಯ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಕೆಳಕಂಡಂತೆ ಅಧಿನಿಯಮಿತವಾಗಲಿ, ಎಂದರೆ:-

1. **ಸಂಕ್ಷಿಪ್ತ ಹೆಸರು.-** ಈ ಅಧಿನಿಯಮವನ್ನು ಕರ್ನಾಟಕ ಧನವಿನಿಯೋಗ ಅಧಿನಿಯಮ, 2004 ಎಂದು ಕರೆಯತಕ್ಕದ್ದು.

2. **ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ 2003-2004ನೇ ಹಣಕಾಸು ವರ್ಷಕ್ಕಾಗಿ 719712.03 ರೂಪಾಯಿಗಳ ನೀಡಿಕೆ.-** ಅನುಸೂಚಿಯ 2ನೇ ಅಂಕಣದಲ್ಲಿ ನಿರ್ದಿಷ್ಟಪಡಿಸಲಾದ ಸೇವೆಗಳ ಸಂಬಂಧದಲ್ಲಿ, 2003-2004ನೇ ಭಾಗದ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿ ಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ಅನುಸೂಚಿಯ 5ನೇ ಅಂಕಣದಲ್ಲಿ ನಿರ್ದಿಷ್ಟಪಡಿಸಲಾಗಿರುವ **ಏಳು ಸಾವಿರದ ಒಂದುನೂರ ತೊಂಬತ್ತೇಳು ಕೋಟಿ ಹನ್ನೆರಡು ಲಕ್ಷ ಮತ್ತು ಮೂರು ಸಾವಿರ ರೂಪಾಯಿಗಳಿಗೆ** ಮೀರದಷ್ಟು ಮೊಬಲಗನ್ನು ಮಾತ್ರ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಸಂದಾಯ ಮಾಡತಕ್ಕದ್ದು ಮತ್ತು ಉಪಯೋಗಿಸತಕ್ಕದ್ದು.

3. **ಧನವಿನಿಯೋಗ.-** ಈ ಅಧಿನಿಯಮದ ಮೂಲಕ, ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಸಂದಾಯ ಮಾಡಲು ಮತ್ತು ಉಪಯೋಗಿಸಲು ಅಧಿಕಾರ ನೀಡಲಾದ ಮೊತ್ತಗಳನ್ನು ಸದರಿ ವರ್ಷಕ್ಕೆ ಸಂಬಂಧಪಟ್ಟಂತೆ ಅನುಸೂಚಿಯಲ್ಲಿ ತಿಳಿಸಲಾದ ಸೇವೆಗಳು ಮತ್ತು ಉದ್ದೇಶಗಳಿಗಾಗಿ ವಿನಿಯೋಗಿಸತಕ್ಕದ್ದು.

ಕರ್ನಾಟಕ ರಾಜ್ಯ ಪತ್ರದ ಭಾಗ-IVಎ ವಿಶೇಷ ಪತ್ರಿಕೆ ಸಂಖ್ಯೆ: 318 ದಿನಾಂಕ: 5.3.2004 ರಲ್ಲಿ ಪ್ರಕಟಿತ ಕಡತ ಸಂಖ್ಯೆ: ಸಂವ್ಯಶಾಇ 14 ಶಾಸನ 2004

**ಅನುಸೂಚಿ**

**(2 ಮತ್ತು 3ನೇ ಪ್ರಕರಣಗಳನ್ನು ನೋಡಿ)**

(ರೂ. ಲಕ್ಷಗಳಲ್ಲಿ)

| ಬೇಡಿಕೆ ಸಂಖ್ಯೆ | ಸೇವೆಗಳು ಮತ್ತು ಉದ್ದೇಶಗಳು | | ಮೀರದ ಮೊಬಲಗು | | ಒಟ್ಟು |
|---|---|---|---|---|---|
| | | | ವಿಧಾನಸಭೆಯಿಂದ ಪುರಸ್ಕೃತ ವಾದುದನ್ನು | ಸಂಚಿತ ನಿಧಿಯಿಂದ ಪ್ರಭೃತವಾದುದನ್ನು | |
| 01 | ಕೃಷಿ ಮತ್ತು ತೋಟಗಾರಿಕೆ | ರಾಜಸ್ವ | 2899.00 | - | 2899.00 |
| 02 | ಪಶುಸಂಗೋಪನೆ ಮತ್ತು ಮೀನುಗಾರಿಕೆ | ರಾಜಸ್ವ | 46.14 | - | 46.14 |
| 03 | ಆರ್ಥಿಕ | ರಾಜಸ್ವ | 157392.17 | - | 157392.17 |
| 04 | ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ | ರಾಜಸ್ವ | 3460.82 | 42.00 | 3502.82 |
| 05 | ಒಳಾಡಳಿತ ಮತ್ತು ಸಾರಿಗೆ | ರಾಜಸ್ವ<br>ಬಂಡವಾಳ | 1839.16<br>8.00 | - | 1839.16<br>8.00 |
| 07 | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ | ರಾಜಸ್ವ | 5250.00 | - | 5250.00 |
| 08 | ಅರಣ್ಯ ಜೀವಿಶಾಸ್ತ್ರ ಮತ್ತು ಪರಿಸರ | ರಾಜಸ್ವ | 393.25 | 1.21 | 394.46 |
| 09 | ಸಹಕಾರ | ರಾಜಸ್ವ<br>ಬಂಡವಾಳ | 12218.25<br>300.00 | - | 12218.25<br>300.00 |
| 10 | ಸಮಾಜ ಕಲ್ಯಾಣ | ರಾಜಸ್ವ<br>ಬಂಡವಾಳ | 308.78<br>1504.00 | -<br>- | 308.78<br>1504.00 |
| 11 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ | ರಾಜಸ್ವ<br>ಬಂಡವಾಳ | 30.01<br>10.00 | -<br>- | 30.01<br>10.00 |
| 12 | ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು | ರಾಜಸ್ವ | 566.50 | - | 566.50 |
| 13 | ಆಹಾರ ಮತ್ತು ನಾಗರೀಕ ಸರಬರಾಜು | ರಾಜಸ್ವ | 3171.65 | - | 3171.65 |
| 14 | ಕಂದಾಯ | ರಾಜಸ್ವ | 1391.50 | - | 1391.50 |
| 15 | ಮಾಹಿತಿ ತಂತ್ರಜ್ಞಾನ | ರಾಜಸ್ವ<br>ಬಂಡವಾಳ | 75.00<br>40.00 | -<br>- | 75.00<br>40.00 |
| 16 | ವಸತಿ | ರಾಜಸ್ವ | 300.00 | - | 300.00 |
| 17 | ಶಿಕ್ಷಣ | ರಾಜಸ್ವ<br>ಬಂಡವಾಳ | 1020.24<br>100.00 | -<br>- | 1020.24<br>100.00 |
| 18 | ವಾಣಿಜ್ಯ ಮತ್ತು ಕೈಗಾರಿಕೆ | ರಾಜಸ್ವ<br>ಬಂಡವಾಳ | 181.96<br>3885.09 | -<br>- | 181.96<br>3885.09 |
| 19 | ನಗರಾಭಿವೃದ್ಧಿ | ರಾಜಸ್ವ<br>ಬಂಡವಾಳ | 1116.00<br>186.76 | -<br>- | 1116.00<br>186.76 |
| 20 | ಲೋಕೋಪಯೋಗಿ | ರಾಜಸ್ವ<br>ಬಂಡವಾಳ | 159.70<br>4033.55 | -<br>- | 159.70<br>4033.55 |

(ರೂ. ಲಕ್ಷಗಳಲ್ಲಿ)

| ಬೇಡಿಕೆ ಸಂಖ್ಯೆ | ಸೇವೆಗಳು ಮತ್ತು ಉದ್ದೇಶಗಳು | | ಮೀರದ ಮೊಬಲಗು | | ಒಟ್ಟು |
|---|---|---|---|---|---|
| | | | ವಿಧಾನಸಭೆಯಿಂದ ಪುರಸ್ಕೃತ ವಾದುದನ್ನು | ಸಂಚಿತ ನಿಧಿಯಿಂದ ಪ್ರಭೃತವಾದುದನ್ನು | |
| 21 | ಜಲಸಂಪನ್ಮೂಲ | ರಾಜಸ್ವ<br>ಬಂಡವಾಳ | 963.10<br>16136.01 | -<br>- | 963.10<br>16136.01 |
| 22 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು | ರಾಜಸ್ವ<br>ಬಂಡವಾಳ | 1629.50<br>1585.00 | -<br>- | 1629.50<br>1585.00 |
| 23 | ಕಾರ್ಮಿಕ | ರಾಜಸ್ವ | 120.00 | - | 120.00 |
| 24 | ಇಂಧನ | ರಾಜಸ್ವ | 500.00 | - | 500.00 |
| 25 | ಕನ್ನಡ ಮತ್ತು ಸಂಸ್ಕೃತಿ | ರಾಜಸ್ವ | 442.79 | - | 442.79 |
| 26 | ಯೋಜನೆ, ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ | ರಾಜಸ್ವ | 91.65 | - | 91.65 |
| 27 | ಕಾನೂನು | ರಾಜಸ್ವ | 35.64 | 35.72 | 71.36 |
| 28 | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ | ರಾಜಸ್ವ | 16.00 | - | 16.00 |
| 29 | ಋಣ ಮೇಲುಸ್ತುವಾರಿ | ರಾಜಸ್ವ<br>ಬಂಡವಾಳ | -<br>- | 3059.08<br>493166.80 | 3059.08<br>493166.80 |
| | ಒಟ್ಟು | ರಾಜಸ್ವ<br>ಬಂಡವಾಳ | **195318.81**<br>**28088.41** | **3138.01**<br>**493166.80** | **198456.82**<br>**521255.21** |
| | ಒಟ್ಟು ಜುಮ್ಲಾ | | **223407.22** | **496304.81** | **719712.03** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

**ಮ.ರಾ. ಹೆಗಡೆ**

ಸರ್ಕಾರದ ಕಾರ್ಯದರ್ಶಿ

ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.